ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ನಿರುದ್ಯೋಗ ನಿವಾರಣೆಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿಕೆ ಕುರಿತು

ಡಾ|| ತೇಜಸ್ವಿನಿಗೌಡ(ವಿಧಾನಸಭೆಯಿಂದ ಚುನಾಯಿತರಾದವರು) -

72 (168) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣಕ್ಕಾಗಿ ವಿಧಿಸಿದ ಲಾಕ್ ಡೌನ್‌ನಿಂದ ಉಂಟಾದ ನಿರುದ್ಯೋಗ ಸಮಸ್ಯೆಯ ನಿವಾರಣೆಗೆ ಸ್ಥಳೀಯ ಉದ್ಯೋಗ ಕಲ್ಪಿಸಲು ಯಾವ ಯಾವ ಕೌಶಲ್ಯ ತರಬೇತಿಗಳನ್ನು ನೀಡಲಾಗಿದೆ;

(ಆ) ಪ್ರಸ್ತುತ ಯಾವ ಯಾವ ಕೌಶಲ್ಯಗಳಿಗೆ ಬೇಡಿಕೆ ಇದೆ ಹಾಗೂ ಉದ್ಯೋಗಾವಕಾಶ ಒದಗಿಸಬಹುದು; ಈ ನಿಟ್ಟಿನಲ್ಲಿ ತರಬೇತಿ ನೀಡಲಾಗುತ್ತಿರುವ ಬಗ್ಗೆ ವಿವರ ನೀಡುವುದು;

(ಇ) ಕೌಶಲ್ಯಾಭಿವೃದ್ಧಿ ತರಬೇತಿ ಪಡೆದವರಿಗೆ ಯಾವ ಯಾವ ಉದ್ಯಮಗಳು ಉದ್ಯೋಗ ನೀಡಬಹುದು ನೀಡಿವೆ ಹಾಗೂ ನೀಡಬೇಕಿದೆ? (ಕೌಶಲ್ಯಾಭಿವೃದ್ಧಿ ತರಬೇತಿ ಪಡೆದಿರುವವರ ಮಾಹಿತಿ ಹಾಗೂ ಉದ್ಯೋಗಾವಕಾಶ ಪಡೆದವರ ಮಾಹಿತಿ ಒದಗಿಸುವುದು)